ಪ್ರಜಾವಾಣಿ

## ಬ್ಯಾಸ್ಕೆಟ್‌ಬಾಲ್: ಸೆಮಿಫೈನಲ್‌ಗೆ ಜೈನ್ ವಿ.ವಿ

ಬೆಂಗಳೂರು: ಜೈನ್ ವಿಶ್ವವಿದ್ಯಾಲಯ ತಂಡ ಚೆನ್ನೈನಲ್ಲಿ ನಡೆಯುತ್ತಿರುವ ಅಖಿಲ ಭಾರತ ಅಂತರ ವಿ.ವಿ ಬ್ಯಾಸ್ಕೆಟ್‌ಬಾಲ್ ಟೂರ್ನಿಯಲ್ಲಿ ಸೆಮಿಫೈನಲ್‌ಗೆ ಲಗ್ಗೆಯಿಟ್ಟಿದೆ.

ಶುಕ್ರವಾರ ನಡೆದ ಕ್ವಾರ್ಟರ್ ಫೈನಲ್ ಹೋರಾಟದಲ್ಲಿ ಬೆಂಗಳೂರಿನ ಜೈನ್ ವಿಶ್ವವಿದ್ಯಾಲಯ 91–76 ಪಾಯಿಂಟ್ಸ್‌ಗಳಿಂದ ಪಂಡಿತ್ ರವಿಶಂಕರ್ ಶುಕ್ಲ ವಿಶ್ವವಿದ್ಯಾಲಯ ತಂಡವನ್ನು ಪರಾಭವಗೊಳಿಸಿತು.